**<u>ಅಸಲು ದಾವಾ ಸಂಖ್ಯೆ-181/2023</u>** **ಪಿ.ಡಬ್ಲ್ಯೂ:- 1**

ದಿನಾಂಕಃ **17-06-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-</u>

ದಾವಾ ಆಸ್ತಿಯನ್ನು ಅಳತೆ ಮಾಡಿಸಲು ಅರ್ಜಿಯನ್ನು 2016-17 ಸಾಲಿನಲ್ಲಿ ಕೊಟ್ಟಿರುತ್ತೇನೆ. ಆದರೆ ನಿರ್ದಿಷ್ಟವಾದ ದಿನಾಂಕ ನನಗೆ ಗೊತ್ತಿಲ್ಲ. ಮೂಲ ಸರ್ವೇ ನಂ.1 ರಲ್ಲಿ ಒಟ್ಟು ಎಷ್ಟು ವಿಸ್ತೀರ್ಣ ಇತ್ತು ಎಂದು ನನಗೆ ಗೊತ್ತಿಲ್ಲ. ನಿಪಿ-7 ರಿಂದ 9 ದಾಖಲೆಗಳನ್ನು ನಾನು ಸರ್ವೇ ಅಧಿಕಾರಿಗಳ ಜೊತೆ ಶಾಮೀಲಾಗಿ ಸೃಷ್ಟಿ ಮಾಡಿದಂತಹ ದಾಖಲೆಗಳು ಎಂದರೆ ಸರಿಯಲ್ಲ. ಪ್ರತಿವಾದಿ 1 ರಿಂದ 7 ರವರು ದಾವಾ ಆಸ್ತಿಯನ್ನು ಸರ್ವೇ ಮಾಡಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿಯು ಮುಂದುವರೆದು ಪ್ರತಿವಾದಿಗಳು ತಮಗೆ ಸೇರಿದಂತಹ ಆಸ್ತಿಯನ್ನು ಸರ್ವೇ ಮಾಡಿಸಿದ್ದಾರೆ ಎಂದು ನುಡಿಯುತ್ತಾರೆ. ಪ್ರತಿವಾದಿಗಳು ದಾವಾ ಆಸ್ತಿಯನ್ನು ಅಳತೆ ಮಾಡಿಸಿದ ನಂತರ ಸರ್ವೇ ಅಧಿಕಾರಿಗಳು ಯಾವುದೇ ಒತ್ತುವರಿ ಆಗಿಲ್ಲ ಎಂದು ವರದಿಯನ್ನು ಕೊಟ್ಟಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ಮೇಲ್ಕಂಡ ವಿಚಾರ ನನಗೆ ಗೊತ್ತಿದ್ದರೂ ಸಹ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಗಳು ದಾವಾ ಆಸ್ತಿಯನ್ನು ಒತ್ತುವರಿ ಮಾಡದಿದ್ದರೂ ಸಹ ಸುಳ್ಳು ದಾವೆಯನ್ನು ಸಲ್ಲಿಸಿ ಮತ್ತು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯನ್ನು ಸರ್ವೇ ಅಧಿಕಾರಿಗಳ ಮೂಲಕ ಸರ್ವೇ ಮಾಡಿಸಿದ ನಂತರ ಪ್ರತಿವಾದಿಗಳು ದಾವಾ ಆಸ್ತಿಯನ್ನು ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ನನಗೆ ತಿಳಿದಿರುತ್ತದೆ. ನನ್ನ ವಾದ ಪತ್ರದಲ್ಲಿ ಪ್ರತಿವಾದಿಗಳು ಬಿ ಶೆಡ್ಯೂಲ್ ಆಸ್ತಿಯನ್ನು ದಿಃ 24-04-2023 ರಂದು ಒತ್ತುವರಿ ಮಾಡಿದ ಬಗ್ಗೆ ನನಗೆ ತಿಳಿಯಿತು ಎಂದು ನಮೂದು ಮಾಡಿದ್ದೇನೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ನನಗೆ ಸರ್ವೇ ಮಾಡಿದ ನಂತರ ಪ್ರತಿವಾದಿಗಳು ಒತ್ತುವರಿ ಮಾಡಿದ ವಿಚಾರ ನನಗೆ

ತಿಳಿದಿರುತ್ತದೆ ಎಂದು ನುಡಿಯುತ್ತಾರೆ. ಎ ಶೆಡ್ಯೂಲ್ ಆಸ್ತಿಯಲ್ಲಿ ಸರ್ವೆ ನಂ.1/3 ರಲ್ಲಿ 4 ಎಕರೆ 36 ಗುಂಟೆ ಜಮೀನು, ಬಿ ಶೆಡ್ಯೂಲ್ ಆಸ್ತಿಯಲ್ಲಿ ಸರ್ವೆ ನಂ.1/3 ರಲ್ಲಿ 6 ಗುಂಟೆ ಜಮೀನಿಗೆ ಸಂಬಂಧಪಟ್ಟಂತೆ ದಾವೆಯನ್ನು ಸಲ್ಲಿಸಿದ್ದೇನೆ. ದಾವಾ ಆಸ್ತಿಯ ದಕ್ಷಿಣ ಭಾಗಕ್ಕೆ 6 ಗುಂಟೆ ಜಮೀನು ಒತ್ತುವರಿ ಆಗಿದೆ ಎಂದು ದಾವೆಯನ್ನು ಸಲ್ಲಿಸಿದ್ದೇನೆ. ದಾವಾ ಎ ಶೆಡ್ಯೂಲ್ ಆಸ್ತಿಯ ಚಕ್ಕುಬಂಧಿ ಪೂರ್ವಕ್ಕೆ ಹೆಚ್ ಜಿ ವೀರಶೇಖರಪ್ಪರವರ ಜಮೀನು, ಪಶ್ಚಿಮಕ್ಕೆ ಮಲ್ಲಿಕಾರ್ಜುನಪ್ಪರವರಿಗೆ ಸೇರಿದ ಜಮೀನು, ಉತ್ತರಕ್ಕೆ ವೀರಶೇಖರಪ್ಪರವರಿಗೆ ಸೇರಿದ ಜಮೀನು, ದಕ್ಷಿಣಕ್ಕೆ ರುದ್ರಮ್ಮ ಮತ್ತು ಪರಮೇಶ್ವರಪ್ಪರವರಿಗೆ ಸೇರಿದ ಜಮೀನು. ದಾವಾ ಬಿ ಶೆಡ್ಯೂಲ್ ಆಸ್ತಿಯ ಚಕ್ಕುಬಂಧಿ ಪೂರ್ವಕ್ಕೆ ಸಾವಿತ್ರಮ್ಮರವರ ಜಮೀನು, ಪಶ್ಚಿಮಕ್ಕೆ ಮಲ್ಲಿಕಾರ್ಜುನಪ್ಪ ಮತ್ತು ಶಿವರಪ್ಪರವರಿಗೆ ಸೇರಿದ ಜಮೀನು, ಉತ್ತರಕ್ಕೆ ವೀರಶೇಖರಪ್ಪರವರಿಗೆ ಸೇರಿದ ಜಮೀನು, ದಕ್ಷಿಣಕ್ಕೆ ರುದ್ರಮ್ಮ ಮತ್ತು ಪರಮೇಶ್ವರಪ್ಪರವರಿಗೆ ಸೇರಿದ ಜಮೀನು. ಪ್ರತಿವಾದಿಗಳಿಗೆ ಸೇರಿದ ಯಾವುದೇ ಜಮೀನು ದಾವಾ ಆಸ್ತಿಯ ಸುತ್ತ ಮುತ್ತ ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ಸೇರಿದ ಜಮೀನು ದಾವಾ ಆಸ್ತಿಯ ದಕ್ಷಿಣ ದಿಕ್ಕಿಗೆ ಬರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯ ದಕ್ಷಿಣಕ್ಕೆ ಪ್ರತಿವಾದಿಗಳಿಗೆ ಸೇರಿದ ಜಮೀನು ಎಂದು ನಮೂದು ಮಾಡಿಲ್ಲ ಎಂದರೆ ಸರಿಯಲ್ಲ. ನಮ್ಮ ಮತ್ತು ಪ್ರತಿವಾದಿಯ ನಡುವೆ ಯಾವುದೇ ಮಾತುಕತೆ ಇರುವುದಿಲ್ಲ. ಪ್ರತಿವಾದಿಗಳ ಮೇಲೆ ದ್ವೇಷದಿಂದ ಸುಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ:- ಇಲ್ಲ

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.